## ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.

## ಸಿ.ಸಿ.ನಂ. 1795/2021

| | | |
|---|---|---|
| ಸಾಕ್ಷಿದಾರರ ಹೆಸರು | : | ರಾಜೇಶ |
| ತಂದೆಯ ಹೆಸರು | : | ಬೆಟ್ಟನಾಯಕ |
| ವಯಸ್ಸು | : | 29 ವರ್ಷ |
| ಉದ್ಯೋಗ | : | ಚಾಲಕ |
| ವಾಸಸ್ಥಳ | : | ಹೆಚ್.ಡಿ. ಕೋಟೆ ಟೌನ್. |

**ಸಾಕ್ಷಿಯನ್ನು ದಿನಾಂಕಃ 11.03.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಮಾನ್ಯ ಸ. ಸ. ಅ. ರವರಿಂದಃ**

ಆರೋಪಿ ನನಗೆ ಪರಿಚಯವಿಲ್ಲ. ಈಗ ನನಗೆ ತೋರಿಸುತ್ತಿರುವ ನಿ.ಪಿ.-1ರಲ್ಲಿ ನನ್ನ ಸಹಿ ಇದ್ದು, ಸದರಿ ಸಹಿಯನ್ನು ಪೋಲೀಸರು ಬೀಟ್ ಗೆ ಬಂದಾಗ ಗದ್ದಿಗೆ ರಸ್ತೆಯಲ್ಲಿ ಹಾಕಿರುತ್ತೇನೆ. ಸಾಕ್ಷಿಯು ನಿ.ಪಿ.-1ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.-1(ಬಿ) ಎಂದು ಗುರುತಿಸಲಾಯಿತು. ನಿ.ಪಿ.-1ರಲ್ಲಿ ಏನೆಲ್ಲಾ ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಮತ್ತು ಏನನ್ನೂ ವಶಪಡಿಸಿಕೊಂಡಿರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೋಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮಾನ್ಯ ಸ.ಸ.ಅ ಕೋರಲಾಗಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅ ರವರಿಂದಃ**

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿನಾಂಕಃ 07.11.2020 ರಂದು ಮಧ್ಯಾಹ್ನ 01.00 ಗಂಟೆ ಸಮಯದಲ್ಲಿ ನಾನು ಮತ್ತು ಚಾಸಾ-2 ಹೆಚ್.ಡಿ. ಕೋಟೆ ಪೋಲೀಸ್ ಠಾಣಾ ಮುಂಭಾಗದಲ್ಲಿ ನಡೆದುಕೊಂಡು ಹೋಗುತ್ತಿದ್ದಾಗ ಚಾಸಾ-1 ರವರು ನಮ್ಮನ್ನು ಠಾಣೆಗೆ ಕರೆದು, ಹಳ್ಳದಮನುಗನಹಳ್ಳಿ ಗ್ರಾಮದ ಬಸ್ ನಿಲ್ದಾಣದಲ್ಲಿ ಒಬ್ಬ ವ್ಯಕ್ತಿ ಯಾವುದೇ ಪರವಾನಗಿ ಇಲ್ಲದೇ ಸಾರ್ವಜನಿಕ ಸ್ಥಳದಲ್ಲಿ ಸಾರ್ವಜನಿಕರಿಗೆ ಮಧ್ಯ ಕುಡಿಯಲು ಸ್ಥಳಾವಕಾಶ ಮಾಡಿಕೊಟ್ಟು, ಮಧ್ಯ ಸೇವನೆ ಮಾಡಲು ಪ್ರಚೋದನೆ ನೀಡುತ್ತಿದ್ದಾರೆಂದು ಮಾಹಿತಿ ಬಂದಿದ್ದು, ಅದಕ್ಕೆ ಪಂಚರಾಗಿ ಸಹಕರಿಸುವಂತೆ ಕೇಳಿರುತ್ತಾರೆಂದರೆ ಸರಿಯಲ್ಲ. ನಂತರ ಎಲ್ಲರು ಸೇರಿ ಖಾಸಗಿ ವಾಹನದಲ್ಲಿ ಮಧ್ಯಾಹ್ನ 02.00 ಗಂಟೆಗೆ ಹಳ್ಳದಮನುಗನಹಳ್ಳಿ ಗೇಟ್ ನ ಬಸ್ ನಿಲ್ದಾಣಕ್ಕೆ ಹೋಗಿ ಅಲ್ಲಿದ್ದ ವ್ಯಕ್ತಿಯನ್ನು ವಿಚಾರಿಸಿದಾಗ ಆತ ತನ್ನ ಹೆಸರು ಜಯಲಿಂಗ, ಜಿ.ಬಿ. ಸರಗೂರು ಗ್ರಾಮ ಎಂದು ತಿಳಿಸಿರುತ್ತಾನೆ ಎಂದರೆ ಸರಿಯಲ್ಲ. ನಂತರ ಅವನ ಬಳಿ ಇದ್ದ 4-5 ಮಧ್ಯದ ಟೆಟ್ರಾ ಪ್ಯಾಕೆಟ್ ಗಳನ್ನು ವಶಪಡಿಸಿಕೊಂಡು, ಆರೋಪಿಯನ್ನು ವಶಕ್ಕೆ ಪಡೆದು ವಾಪಸ್ ಬರುವಾಗ ಕ್ಯಾತನಹಳ್ಳಿ ಗೇಟ್ ಬಳಿ ಚಾಸಾ-1 ರವರಿಗೆ ಬಾತ್ಮೀದಾರರು ಸಿಕ್ಕಿ ಗಂಗಡಹೊಸಹಳ್ಳಿಯ ಅರಳೀಮರದ ಹತ್ತಿರವಿರುವ ಪೆಟ್ಟಿಗೆ ಅಂಗಡಿಗಳಲ್ಲಿ ಮಧ್ಯ ಮಾರಾಟ ಮಾಡುತ್ತಿದ್ದಾರೆಂದು ಮಾಹಿತಿ ನೀಡಿದ್ದರಿಂದ ನಮ್ಮನ್ನು ಕರೆದುಕೊಂಡು ಮಧ್ಯಾಹ್ನ 03.45 ಗಂಟೆಗೆ ಗಂಗಡಹೊಸಹಳ್ಳಿ ಗ್ರಾಮದ ಬಸ್ ನಿಲ್ದಾಣದ ಬಳಿ ಇರುವ ಅರಳೀಮರದ ಹತ್ತಿರ ಇದ್ದ 01 ಪೆಟ್ಟಿಗೆ ಅಂಗಡಿಯಲ್ಲಿದ್ದ ನಂಜುಂಡೇಗೌಡ ಎಂಬುವವರನ್ನು ವಶಕ್ಕೆ ಪಡೆದು, ಅವರ ಅಂಗಡಿಯಲ್ಲಿದ್ದ ಮಧ್ಯದ ಟೆಟ್ರಾ ಪ್ಯಾಕೆಟ್ ಗಳನ್ನು ವಶಪಡಿಸಿಕೊಂಡು, ಮಹಜರ್ ಕ್ರಮ ಜರುಗಿಸಿರುತ್ತಾರೆಂದರೆ ಸರಿಯಲ್ಲ. ನಂತರ ಅವರ ಅಂಗಡಿಯಿಂದ 100-150 ಅಡಿ ದೂರದಲ್ಲಿದ್ದ ಮತ್ತೊಂದು ಪೆಟ್ಟಿಗೆ ಅಂಗಡಿಗೆ ಸಂಜೆ 05.00 ಗಂಟೆಗೆ ಹೋಗಿ ಆ ಅಂಗಡಿಯಲ್ಲಿದ್ದ ವ್ಯಕ್ತಿಯನ್ನು ವಿಚಾರಿಸಿದಾಗ ಆತ ತನ್ನ ಹೆಸರು ಶೆಟ್ಟಿಗೌಡ ಬಿನ್ ನಿಂಗೇಗೌಡ ಎಂದು ತಿಳಿಸಿರುತ್ತಾರೆಂದರೆ ಸರಿಯಲ್ಲ. ನಂತರ ಅಂಗಡಿಯನ್ನು ಪರಿಶೀಲಿಸಿದಾಗ ಅಂಗಡಿಯ ಒಳಗಿದ್ದ 01 ಚೀಲದಲ್ಲಿ ಓಲ್ಡ್ ಟ್ಯಾವರಿನ್ ಎಂದು ಲೇಬಲ್ ಇದ್ದ 180 ಎಂ.ಎಲ್.ನ

**CC** 1795/2021
<u>ಸಿ.ಡಬ್ಲೂ.-03 / ಪಿ.ಡಬ್ಲೂ-02</u>

04 ಮಧ್ಯದ ಟೆಟ್ರಾ ಪ್ಯಾಕೆಟ್ ಗಳು ಮತ್ತು ಒರಿಜಿನಲ್ ಚಾಯ್ಸ್ ಡಿಲಕ್ಸ್ ವಿಸ್ಕಿ ಎಂದು ಲೇಬಲ್ ಇದ್ದ 90 ಎಂ.ಎಲ್. ನ 30 ಮಧ್ಯದ ಟೆಟ್ರಾ ಪ್ಯಾಕೆಟ್ ಗಳಿದ್ದವು ಎಂದರೆ ಸರಿಯಲ್ಲ.. ನಂತರ ಅತನನ್ನು ಪರವಾನಗಿ ಬಗ್ಗೆ ಕೇಳಿದಾಗ ಆತನ ಬಳಿ ಯಾವುದೇ ಪರವಾನಗಿ ಇರುವುದಿಲ್ಲವೆಂದು ತಿಳಿಸಿರುತ್ತಾನೆಂದರೆ ಸರಿಯಲ್ಲ. ನಂತರ ಸ್ಥಳದಲ್ಲಿ ಎಲ್ಲಾ ಮಧ್ಯದ ಪ್ಯಾಕೆಟ್ ಗಳನ್ನು ರಾಸಾಯನಿಕ ಪರೀಕ್ಷೆಗಾಗಿ ಪ್ರತ್ಯೇಕಿಸಿ, ಬಿಳಿ ಬಟ್ಟೆಯಿಂದ ಸುತ್ತಿ, ಮೊಹರು ಹಾಕಿ, **A** ಎಂಬ ಇಂಗ್ಲೀಷ್ ಅಕ್ಷರದಿಂದ ಸೀಲ್ ಮಾಡಿ, ಸ್ಥಳದಲ್ಲಿ ನಿ.ಪಿ.-1 ರಂತೆ ಮಹಜರ್ ಜರುಗಿಸಿ ಎಲ್ಲಾ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ವಶಪಡಿಸಿಕೊಂಡ ಮಧ್ಯದ ಟೆಟ್ರಾ ಪ್ಯಾಕೆಟ್ ಗಳನ್ನು ನೋಡಿದರೆ ಗುರುತಿಸಲಾಗುವುದಿಲ್ಲ. ಈಗ ನನಗೆ ಓದಿ ಹೇಳಿದಂತೆ ತನಿಖಾಧಿಕಾರಿಗಳ ಮುಂದೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಯು ಸದರಿ ಹೇಳಿಕೆಯ ಭಾಗವನ್ನು ಅಲ್ಲಗಳೆದಿದ್ದರಿಂದ ಕೆಂಪು ಶಾಹಿಯಿಂದ ಗುರುತಿಸಲಾದ ಸದರಿ ಹೇಳಿಕೆಯ ಭಾಗವನ್ನು ನಿ.ಪಿ.-2 ಎಂದು ಗುರುತಿಸಲಾಯಿತು. ಪೋಲೀಸರು ವಶಪಡಿಸಿಕೊಂಡ ಮಧ್ಯದ ಟೆಟ್ರಾ ಪ್ಯಾಕೆಟ್ ಗಳನ್ನು ನೋಡಿದರೆ ನನಗೆ ಗುರುತಿಸಲಾಗುವುದಿಲ್ಲ. ನನ್ನ ಸಮಕ್ಷಮ ಆರೋಪಿ ಮತ್ತು ಮಧ್ಯದ ಟೆಟ್ರಾ ಪ್ಯಾಕೆಟ್ ಗಳನ್ನು ವಶಪಡಿಸಿಕೊಂಡಿದ್ದರು ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u> ಆರೋಪಿ ಪರ ವಕೀಲರಿಂದಃ ಏನೂ ಇರುವುದಿಲ್ಲ.**

**<u>ಮರು ವಿಚಾರಣೆಃ ಇರುವುದಿಲ್ಲ.</u>**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**